1ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿಗಳ ನ್ಯಾಯಾಲಯ, ಬೆಂಗಳೂರು.

ಸಿಸಿ ನಂ.5473/2012

| | | | |
|---|---|---|---|
| ಹೆಸರು | : | ಕೆ.ವಿ.ಫಣೀಶ್ | ಪ್ರಾಸಾಃ 12 |
| ತಂದೆಯ ಹೆಸರು | : | ವೆಂಕಟನರಸಪ್ಪ | ಚಾಸಾಃ 88 |
| ವಯಸ್ಸು | : | 40 ವರ್ಷ | |
| ಉದ್ಯೋಗ | : | ಸಾಫ್ಟ್‌ವೇರ್ ಇಂಜಿನಿಯರ್ | |
| ವಾಸ | : | ಬೆಂಗಳೂರು. | |

ದಿಃ 27.01.2021 ರಂದು ಪ್ರಮಾಣೀಕರಿಸಲಾಯಿತು.

ಮುಖ್ಯ ವಿಚಾರಣೆಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಆರೋಪಿಗಳು ಗೊತ್ತು. ಆರೋಪಿಗಳು ಕೆಂಗೇರಿಯ ಸಂಯುಕ್ತ ಎನ್‌ಕ್ಲೇವ್ ಎಂಬ ಲೇ ಔಟ್ ಮಾಡುತ್ತೇವೆಂದು ಪ್ರಕಟಿಸಿದ್ದು, ಅದರಂತೆ ಅಲ್ಲಿ ನಾನು ಒಂದು ನಿವೇಶನವನ್ನು ಖರೀದಿ ಮಾಡಲು ತೀರ್ಮಾನಿಸಿದ್ದೆವು. ಈ ಸಂಬಂಧವಾಗಿ ಸದರಿ ಸಂಸ್ಥೆಯವರು ಸದರಿ ನಿವೇಶನವನ್ನು ತೋರಿಸಿರುತ್ತಾರೆ. ಪ್ರತಿ ಚದರ ಅಡಿಗೆ 1,250 ರೂ ಯಂತೆ ಮಾರಾಟ ಮಾಡುವುದಾಗಿ ಆರೋಪಿಗಳು ಒಪ್ಪಿಕೊಂಡಿರುತ್ತಾರೆ. ಈ ಪ್ರಕಾರ ಸದರಿ ನಿವೇಶನಕ್ಕೆ ಮಾರಾಟ ಬೆಲೆ ನಿಗಧಿ ಮಾಡಿ ಕರಾರು ಪತ್ರವನ್ನು ಮಾಡಿಸಿಕೊಳ್ಳಲು ಬರುವಂತೆ ನನಗೆ ತಿಳಿಸಿರುತ್ತಾರೆ. ಅದರಂತೆ ನವೆಂಬರ್ 2009 ರಂದು ನನಗೆ ಕರಾರು ಪತ್ರವನ್ನು ಬರೆದುಕೊಟ್ಟಿರುತ್ತಾರೆ. ಸದರಿ ಕರಾರು ಪತ್ರದಂತೆ ಮುಂಗಡ ಹಣವಾಗಿ ಒಟ್ಟು 17,23,000/- ಹಣವನ್ನು ಸದರಿ ಸಂಸ್ಥೆಯವರಿಗೆ ಪಾವತಿ ಮಾಡಿದ್ದೇನೆ. ಸದರಿ ಹಣಕ್ಕೆ ಸಂಸ್ಥೆಯವರು ರಸೀದಿಯನ್ನು ಕೊಟ್ಟಿರುತ್ತಾರೆ. ಒಂದು ಪಕ್ಷ ನಿವೇಶನ ಬೇಡವಾದರೆ ಬಡ್ಡಿ ಸಹಿತ ಮುಂಗಡ ಹಣವನ್ನು ವಾಪಸ್ ಕೊಡುತ್ತೇವೆಂದು ತಿಳಿಸಿರುತ್ತಾರೆ. ಆ ನಂತರ ಒಂದು ವರ್ಷದ ನಂತರ ಸದರಿ ಸಂಸ್ಥೆಯ ಕಚೇರಿಗೆ ಭೇಟಿ

ಕೊಡಲು ಹೋದಾಗ ಅಲ್ಲಿ ಯಾರು ಇರಲಿಲ್ಲ, ಆದ್ದರಿಂದ ಸದರಿ ಸಂಸ್ಥೆಯವರು ನನಗೆ ಯಾವುದೇ ನಿವೇಶನವನ್ನಾಗಲೀ, ಕೊಟ್ಟಂತಹ ಹಣವನ್ನಾಗಲೀ ಕೊಟ್ಟಿರುವುದಿಲ್ಲ. ಈ ರೀತಿ ಸದರಿ ಸಂಸ್ಥೆಯವರು ನನಗೆ ಮೋಸ ಮಾಡಿರುತ್ತಾರೆ. ಆ ನಂತರ ಪೊಲೀಸ್ ಠಾಣೆಯಲ್ಲಿ ಆರೋಪಿಗಳ ವಿರುದ್ಧ ದೂರನ್ನು ಸಲ್ಲಿಸಿದ್ದೇನೆ. ರೂ.2,23,000/- ಬಗ್ಗೆ 1ನೇ ಆರೋಪಿ ಒಂದು ಚೆಕ್‌ನ್ನು ನನಗೆ ನೀಡಿದ್ದು, ಅದು ಸಹ ಅಮಾನ್ಯಗೊಂಡಿರುತ್ತದೆ. ಈ ಬಗ್ಗೆ ನಾನು 1ನೇ ಆರೋಪಿಯ ಮೇಲೆ ಚೆಕ್ ಬೋನ್ಸ್ ಕೇಸ್ ಹಾಕಿರುತ್ತೇನೆ. ಈ ಹಂತದಲ್ಲಿ ಮೂಲ ಕರಾರು ಹಾಜರುಪಡಿಸಲು ಸಮಯ ಕೋರಿದ್ದು, ಸಮಯ ನೀಡಿದೆ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸ. ಇ.

1ನೇ ಅ. ಮು. ಮ. ದಂ. ನ್ಯಾಯಾಲಯ

**ಪಿಡಬ್ಲ್ಯೂ: 12**